# ಕರ್ನಾಟಕ ಸರ್ಕಾರ

**ಸಂಖ್ಯೆ:** ಕಾಇ 292 ಎಲ್ಇಟಿ 2022

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ:30/11/2022

**ಇವರಿಂದ:**
ಸರ್ಕಾರದ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ,
ವಿಕಾಸಸೌಧ, ಬೆಂಗಳೂರು.

**ಇವರಿಗೆ:**
ಜಂಟಿ ಕಾರ್ಯದರ್ಶಿ ಹಾಗೂ
ಜಂಟಿ ಕಾರ್ಮಿಕ ಆಯುಕ್ತರು,
ಕರ್ನಾಟಕ ರಾಜ್ಯ ಅಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ
ಕಾರ್ಮಿಕ ಇಲಾಖೆ, ಕಾರ್ಮಿಕ ಭವನ,
ಬನ್ನೇರುಘಟ್ಟ ರಸ್ತೆ, ಬೆಂಗಳೂರು.

ಮಾನ್ಯರೇ,

**ವಿಷಯ** :- ಕರ್ನಾಟಕ ರಾಜ್ಯ ಅಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ 2022-23ನೇ ಸಾಲಿನ ಪರಿಷ್ಕೃತ ಕ್ರಿಯಾ ಯೋಜನೆಯನ್ನು (Revised Action Plan) ಅನುಮೋದಿಸುವ ಬಗ್ಗೆ.

**ಉಲ್ಲೇಖ** :-
1. ತಮ್ಮ ಕಛೇರಿಯ ಪತ್ರ ಸಂಖ್ಯೆ: ಅಸಂಕಾ/ಲೆಕ್ಕಪತ್ರ/ಕ್ರಿ.ಯೋ/ಸಿ.ಆರ್-04/2022-23, ದಿನಾಂಕ: 18/05/2022 & 19/10/2022.
2. ಸರ್ಕಾರದ ಇದೇ ಸಮಸಂಖ್ಯೆಯ ಪತ್ರ ದಿನಾಂಕ:04/06/2022.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2022-23ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಅಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ ಹಾಗೂ ಮಂಡಳಿಯ ಆಡಳಿತಾತ್ಮಕ ಲೆಕ್ಕಶೀರ್ಷಿಕೆ 2230-01-111-0-05ರಡಿ ಹಂಚಿಕೆಯಾದ ರೂ.1.00 ಲಕ್ಷ ಸೇರಿದಂತೆ ಹಿಂದಿನ ಸಾಲುಗಳಲ್ಲಿ ಲಭ್ಯವಿರುವ ಒಟ್ಟು ಮೊತ್ತ ರೂ.458.46 ಲಕ್ಷಗಳ ಅನುದಾನವನ್ನು ಬಳಸಿಕೊಂಡು ಯೋಜನೆಗಳನ್ನು ಜಾರಿಗೊಳಿಸಲು **ಪರಿಷ್ಕೃತ ಕ್ರಿಯಾ ಯೋಜನೆ**ಯನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಲಾಗಿದೆ ಎಂದು ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

## ಪರಿಷ್ಕೃತ ಕ್ರಿಯಾ ಯೋಜನೆ

| ಕ್ರ. ಸಂ. | ಸೌಲಭ್ಯಗಳ ವಿವರ | ಫಲಾನುಭವಿಗಳ ಸಂಖ್ಯೆ | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|---|
| 1. | ಅಧಿಕಾರಿಗಳ ಮತ್ತು ಸಿಬ್ಬಂದಿಗಳ ವೇತನ/ ಮಂಡಳಿಯ ಆಡಳಿತಾತ್ಮಕ ವೆಚ್ಚ | 81 | 350.00 |
| 2 | ಅಸಂಘಟಿತ ಕಾರ್ಮಿಕರ ನೋಂದಣಿ ಹಾಗೂ ಸ್ಮಾರ್ಟ್ ಕಾರ್ಡ್ ವಿತರಣೆ | 15,000 | 15.00 |
| 3 | ಕಾರ್ಮಿಕ ಸೇವಾ ಕೇಂದ್ರಗಳ ನಿರ್ವಹಣೆ (169 ಕೇಂದ್ರಗಳು) | --- | 25.00 |
| 4 | ಅಂತರಾಷ್ಟ್ರೀಯ ವಿದೇಶಿ ಉದ್ಯೋಗ ಕೋಶ | 150 | 20.00 |
| 5 | ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳು | | 48.46 |
| (ನಾಲ್ಕು ಕೋಟಿ ಐವತ್ತೆಂಟು ಲಕ್ಷದ ನಲವತ್ತಾರು ಸಾವಿರ ರೂಪಾಯಿಗಳು) | | ಒಟ್ಟು | 458.46 |

..2

**ಷರತ್ತುಗಳು:**

- ಪ್ರಸ್ತಾಪಿತ ಕ್ರಿಯಾ ಯೋಜನೆಯು ಒದಗಿಸಿರುವ ಆಯವ್ಯಯದ ಮಿತಿಯನ್ನು ಮೀರಬಾರದು.
- ಕರ್ನಾಟಕ ರಾಜ್ಯ ಅಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಕೈಗೊಳ್ಳುವ ಕಾರ್ಯಕ್ರಮಗಳ ಕಾರ್ಯಚಟುವಟಿಕೆಗಳ ಪ್ರಗತಿಯ ವರದಿಯನ್ನು ತಪ್ಪದೇ ಪ್ರತಿ ತಿಂಗಳು ಸಲ್ಲಿಸಬೇಕು.
- ಕ್ರಿಯಾ ಯೋಜನೆಯಲ್ಲಿ ಏನಾದರೂ ಬದಲಾವಣೆಗಳನ್ನು ಮಾಡುವುದಾದಲ್ಲಿ ಕಡ್ಡಾಯವಾಗಿ ಸರ್ಕಾರದ ಪೂರ್ವಾನುಮತಿಯನ್ನು ಪಡೆಯಬೇಕು.
- ಪ್ರಸ್ತಾಪಿತ ಕ್ರಿಯಾ ಯೋಜನೆಯನ್ನು ಮುಂದಿನ ಮಂಡಳಿಯ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆಯತಕ್ಕದ್ದು.
- ಯೋಜನೆಗಳನ್ನು ಕೈಗೊಳ್ಳುವಾಗ ಟೆಂಡರ್ ಪ್ರಕ್ರಿಯೆ ಕೈಗೊಳ್ಳುವುದಿದ್ದಲ್ಲಿ ಕೆ.ಟಿ.ಪಿ.ಪಿ. ಕಾಯ್ದೆ, 2000ರ ನಿಯಮಗಳಿಗನುಸಾರವಾಗಿ ಕೈಗೊಳ್ಳತಕ್ಕದ್ದು.
- ಆರ್ಥಿಕ ಇಲಾಖೆ ಕಾಲಕಾಲಕ್ಕೆ ಹೊರಡಿಸುವ ಆದೇಶ/ಟಿಪ್ಪಣಿಗಳಿಗೆ ಅನುಗುಣವಾಗಿ ಕ್ರಿಯಾ ಯೋಜನೆಯು ಇರುವ ಬಗ್ಗೆ ಖಚಿತಪಡಿಸಿಕೊಳ್ಳುವುದು.
- ಆರ್ಥಿಕ ಇಲಾಖೆಯು ಹೊರಡಿಸುವ ಅಧಿಕಾರ ಪ್ರತ್ಯಾಯೋಜನೆಗನುಸಾರವಾಗಿ ಕ್ರಿಯಾ ಯೋಜನೆಯ ಅನುಷ್ಠಾನವನ್ನು ಕೈಗೊಳ್ಳತಕ್ಕದ್ದು.

(ಮಾನ್ಯ ಇಲಾಖಾ ಸಚಿವರಿಂದ
ಅನುಮೋದಿಸಲ್ಪಟ್ಟಿದೆ)

ತಮ್ಮ ನಂಬುಗೆಯ,

**(ಎಸ್. ಎಜಾಸ್ ಪಾಷ,)** ೩೦/೧೧/೨೦೨೨
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ.

**ಪ್ರತಿಯನ್ನು:**

1. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕಾರ್ಮಿಕ ಇಲಾಖೆ, ಬೆಂಗಳೂರು.
4. ಹೆಚ್ಚುವರಿ ಪ್ರತಿಗಳು / ಶಾಖಾ ರಕ್ಷಾ ಕಡತ.

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ (ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ) (ಲೆಕ್ಕ ಶೀರ್ಷಿಕೆ 2230-01-111-0-05) ಜಾರಿಗಾಗಿ 2022-23ನೇ ಸಾಲಿನ ಕ್ರಿಯಾ ಯೋಜನೆ**

## I. ಪ್ರಸ್ತಾವನೆ:

ಕೇಂದ್ರ ಸರ್ಕಾರದ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ 2008ರ ಕಲಂ 6ರನ್ವಯ ಕರ್ನಾಟಕ ರಾಜ್ಯ ಸರ್ಕಾರವು ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತೆ ಒದಗಿಸಲು ಸೂಕ್ತ ಕಲ್ಯಾಣ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸಲು, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯನ್ನು ದಿನಾಂಕ:05-10-2009 ರಂದು ಸ್ಥಾಪಿಸಲಾಗಿದೆ. ಮಂಡಳಿಯು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ಜಾರಿಗೊಳಿಸುತ್ತಿರುವ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

### 1. ಮಂಡಳಿಯ ಆಡಳಿತಾತ್ಮಕ ವೆಚ್ಚ.

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಕಾರ್ಯ ನಿರ್ವಹಣೆಗೆ ಕಾರ್ಮಿಕ ಇಲಾಖೆಯಿಂದ ನಿಯೋಜನೆಗೊಂಡ ಅಧಿಕಾರಿಗಳು, ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ನಿವೃತ್ತ ಅಧಿಕಾರಿಗಳು ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ಸಿಬ್ಬಂದಿಗಳು ಸೇರಿದಂತೆ ಪ್ರಸ್ತುತ 81 ಸಿಬ್ಬಂದಿಗಳು ಸೇವೆ ಸಲ್ಲಿಸುತ್ತಿದ್ದಾರೆ. ಅವರುಗಳ ವೇತನ, ಅಧಿಕಾರಿಗಳ ಪ್ರವಾಸ ಭತ್ಯೆ, ಕಛೇರಿಯ ವಿದ್ಯುತ್ಶಕ್ತಿ, ಕಛೇರಿಯ ಬಾಡಿಗೆ, ದೂರವಾಣಿ ವೆಚ್ಚ, ಮಂಡಳಿಯ ಸರ್ವ ಸದಸ್ಯರ ಸಾಮಾನ್ಯ ಸಭೆ ಹಾಗೂ ಇತರೆ ಆಡಳಿತಾತ್ಮಕ ವೆಚ್ಚ ಭರಿಸಲು ಲಭ್ಯವಿರುವ ಅನುದಾನದಲ್ಲಿ ಅವಕಾಶ ಕಲ್ಪಿಸಲಾಗಿದೆ.

### 2. ಸ್ಮಾರ್ಟ್ ಕಾರ್ಡ್ ಸೌಲಭ್ಯ :

ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ, 2008 ರ ಪ್ರಾವಧಾನಗಳನ್ವಯ, ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ, 11 ಅಸಂಘಟಿತ ವಲಯಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ಏಕ ಶೀರ್ಷಿಕೆ ಮತ್ತು ಏಕ ಚಿಹ್ನೆಯಡಿ ನೋಂದಾಯಿಸಿ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದೆ.

### 3. ಶ್ರಮ ಸಮ್ಮಾನ ಪುರಸ್ಕಾರ :

ಈ ಕಾರ್ಯಕ್ರಮದಡಿ ಪ್ರತಿ ವರ್ಷ ಮಾರ್ಚ್ 01ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಾರ್ಮಿಕ ಸಮ್ಮಾನ ದಿನವನ್ನು ಆಚರಿಸಲಾಗುತ್ತಿದೆ. ಸದರಿ ಸಂದರ್ಭದಲ್ಲಿ ಅಸಂಘಟಿತ ವಲಯದಲ್ಲಿ ಗುರುತರ ಸೇವೆ ಸಲ್ಲಿಸಿದ ಕಾರ್ಮಿಕರನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ, 11 ವರ್ಗಗಳ ಕಾರ್ಮಿಕರಿಗೆ ಪ್ರತಿಯೊಂದು ಜಿಲ್ಲೆಗೆ ಪ್ರತಿಯೊಂದು ವಲಯಕ್ಕೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಪ್ರಶಸ್ತಿ ಮತ್ತು 8 ವಿಶೇಷ ಪುರಸ್ಕಾರ ಪ್ರಶಸ್ತಿಗಳು ಸೇರಿ ಒಟ್ಟು 3630 ಕಾರ್ಮಿಕರಿಗೆ "ಶ್ರಮ ಸಮ್ಮಾನ ಪ್ರಶಸ್ತಿ" ನೀಡಿ ಗೌರವಿಸಲಾಗುತ್ತಿದೆ. ಸದರಿ ದಿನಾಚರಣೆಯನ್ನು ರಾಜ್ಯದಾದ್ಯಂತ ಜಿಲ್ಲಾ ಕೇಂದ್ರಗಳಲ್ಲಿ ಆಚರಿಸಬೇಕಾಗಿದ್ದು, ತಗಲುವ ವೆಚ್ಚವನ್ನು ಮಂಡಳಿಯಿಂದ ಭರಿಸಬೇಕಾಗುತ್ತದೆ ಹಾಗೂ ಇದಕ್ಕಾಗಿ 2022-23ನೇ ಸಾಲಿನ ವರ್ಷಾಂತ್ಯದಲ್ಲಿ ರಾಜ್ಯದ ಎಲ್ಲಾ ಕಾರ್ಮಿಕ ಅಧಿಕಾರಿಗಳಿಗೆ ಅನುದಾನವನ್ನು ಬಿಡುಗಡೆಗೊಳಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ ರೂ. 1.00 ಲಕ್ಷಗಳ ಅನುದಾನವನ್ನು ಮಾತ್ರ ಹಂಚಿಕೆ ಮಾಡಿರುವ ಕಾರಣ ಸದರಿ ಕಾರ್ಯಕ್ರಮವನ್ನು ಜಾರಿಗೊಳಿಸುವುದು ಅಸಾಧ್ಯವಾಗಿದ್ದು, ಹೆಚ್ಚುವರಿ ಅನುದಾನವನ್ನು ಹಂಚಿಕೆ ಮಾಡಿದಲ್ಲಿ ಕಾರ್ಯಕ್ರಮ ಆಯೋಜಿಸಬಹುದಾಗಿರುತ್ತದೆ.

4. **ಕಾರ್ಮಿಕ ಸೇವಾ ಕೇಂದ್ರ :**

ಕಾರ್ಮಿಕ ಇಲಾಖೆ ಹಾಗೂ ಅದರ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಂಡಳಿ ಹಾಗೂ ಸೊಸೈಟಿಗಳು ಜಾರಿಗೊಳಿಸುತ್ತಿರುವ ಯೋಜನೆ / ಕಾರ್ಯಕ್ರಮಗಳಡಿ ದೊರಕುವ ಸೌಲಭ್ಯಗಳ ಕುರಿತು ಫಲಾನುಭವಿಗಳಿಗೆ ಅರಿವು ಮೂಡಿಸಲು ಹಾಗೂ ಸೌಲಭ್ಯಗಳನ್ನು ಪಡೆಯಲು ಸಹಾಯ ನೀಡಲು 2018-19ನೇ ಸಾಲಿನಲ್ಲಿ ನಿರ್ಧರಿಸಿದಂತೆ, ರಾಜ್ಯದ 169 ತಾಲ್ಲೂಕುಗಳಲ್ಲಿ ಈಗಾಗಲೇ ಕಾರ್ಮಿಕ ಸೇವಾ ಕೇಂದ್ರಗಳನ್ನು ಮಂಡಳಿಯ ವತಿಯಿಂದ ತೆರೆಯಲಾಗಿದೆ. ಸದರಿ ಕಾರ್ಮಿಕ ಸೇವಾ ಕೇಂದ್ರಗಳಿಗೆ ತಗಲುವ ಕಟ್ಟಡ ಬಾಡಿಗೆ, ವಿದ್ಯುತ್ಶಕ್ತಿ ವೆಚ್ಚ, ದೂರವಾಣಿ ವೆಚ್ಚ ಇತ್ಯಾದಿ ಖರ್ಚು-ವೆಚ್ಚಗಳನ್ನು ಮಂಡಳಿಯೇ ಭರಿಸಬೇಕಾಗಿದೆ.

5. **ಅಂತರಾಷ್ಟ್ರೀಯ ವಿದೇಶಿ ಕೋಶ :**

ಪ್ರತಿ ವರ್ಷ ರಾಜ್ಯದಾದ್ಯಂತ ಪರಿಣಿತ, ಅರೆಪರಿಣಿತ ಹಾಗೂ ಪರಿಣಿತರಲ್ಲದ ಸಹಸ್ರಾರು ಕಾರ್ಮಿಕರು ಉದ್ಯೋಗಕ್ಕಾಗಿ ವಿದೇಶಗಳಿಗೆ ತೆರಳುತ್ತಿದ್ದು, ಮಧ್ಯವರ್ತಿ ಸಂಸ್ಥೆಗಳಿಂದ ಶೋಷಣೆಗೆ ಒಳಗಾಗುತ್ತಿರುವುದನ್ನು ಗಮನಿಸಿ ಅವರ ಹಿತರಕ್ಷಣೆಗಾಗಿ ರಾಜ್ಯ ಸರ್ಕಾರವು ರಾಜ್ಯದಲ್ಲಿ ವಿದೇಶಿ ಉದ್ಯೋಗ ಕೋಶ (International Migration Centre-Karnataka(IMCK) ವನ್ನು ಸ್ಥಾಪಿಸಲು 2018-19ನೇ ಸಾಲಿನಲ್ಲಿ ನಿರ್ಧರಿಸಿದ್ದು, ಅರೆಪರಿಣಿತ ಹಾಗೂ ಪರಿಣಿತರಲ್ಲದ ಕಾರ್ಮಿಕರಿಗೆ ಸಂಬಂಧಪಟ್ಟ ಹೊಣೆಯನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಗೆ ವಹಿಸಿದೆ.

ಈ ದಿಸೆಯಲ್ಲಿ, ಭಾರತ ಸರ್ಕಾರದ ವಿದೇಶಾಂಗ ಮಂತ್ರಾಲಯವು ಮಂಡಳಿಯನ್ನು ನೋಂದಣಿ ಸಂಸ್ಥೆಯಾಗಿ ನೇಮಕಾತಿ ಮಾಡಿರುತ್ತದೆ. ಸದರಿ ಉದ್ದೇಶಕ್ಕಾಗಿ ವಿಶೇಷ ಪರಿಣತಿ ಹೊಂದಿದ ಸಿಬ್ಬಂದಿಗಳ ಅವಶ್ಯಕತೆ ಇದ್ದು, ಸೂಕ್ತ ಕ್ರಮ ಕೈಗೊಳ್ಳಬೇಕಾಗಿದೆ.

6. **ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳು:**

ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಯಡಿ ದೊರಕುವ ಸೌಲಭ್ಯಗಳ ಕುರಿತು ಅಸಂಘಟಿತ ಕಾರ್ಮಿಕರಲ್ಲಿ ಅರಿವು ಮೂಡಿಸುವ ಸಲುವಾಗಿ ಕರಪತ್ರಗಳ ಮುದ್ರಣ, ಬ್ಯಾನರ್, ಹೋರ್ಡಿಂಗ್ಸ್‌ಗಳ ಅಳವಡಿಕೆ, ವೃತ್ತ ಪತ್ರಿಕೆಗಳಲ್ಲಿ ಜಾಹೀರಾತು, ಲಭ್ಯವಿರುವ ಎಲ್ಲಾ ಮಾಧ್ಯಮಗಳ ಮೂಲಕ ಪ್ರಚಾರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು.

## II. ಯೋಜನೆಗೆ ಆಯವ್ಯಯ:

ಮಂಡಳಿಯ ಆಡಳಿತಾತ್ಮಕ ವೆಚ್ಚಕ್ಕಾಗಿ ಪ್ರತಿ ವರ್ಷವು ರಾಜ್ಯ ಸರ್ಕಾರವು ಲೆಕ್ಕ ಶೀರ್ಷಿಕೆ: 2230-01-111-0-05ಯಡಿ ಅನುದಾನವನ್ನು ಹಂಚಿಕೆ ಮಾಡುತ್ತಿದೆ. 2017-18ನೇ ಸಾಲಿನಿಂದ ಪ್ರಾರಂಭಿಸಲಾದ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯ ಜಾರಿಗಾಗಿ ನಿಗದಿಪಡಿಸಿರುವ ಅನುದಾನವನ್ನು ಸೇರಿಸಿ ಸರ್ಕಾರವು ಸದರಿ ಲೆಕ್ಕಶೀರ್ಷಿಕೆಯಡಿ ಹಂಚಿಕೆ ಮಾಡುತ್ತಿದೆ. 2022-23ನೇ ಸಾಲಿನಲ್ಲಿ ಈ ಲೆಕ್ಕ ಶೀರ್ಷಿಕೆಯಡಿ ರೂ.1.00 ಲಕ್ಷಗಳನ್ನು ಹಂಚಿಕೆ ಮಾಡಿರುತ್ತದೆ.

ಯೋಜನೆಯ ಜಾರಿಗೆ ಹಿಂದಿನ ಸಾಲುಗಳಲ್ಲಿ ಬಿಡುಗಡೆಗೊಳಿಸಿದ ಅನುದಾನದಲ್ಲಿ ಮಾರ್ಚ್-2022ರ ಅಂತ್ಯಕ್ಕೆ ಬಡ್ಡಿಯು ಸೇರಿದಂತೆ ಒಟ್ಟು ರೂ.457.46 ಲಕ್ಷಗಳು (ನೋಂದಣಿ ಶುಲ್ಕ, ಪಿ.ಎಂ.ಎಸ್.ವೈ.ಎಂ ಅನುದಾನ ಮತ್ತು ಕೋವಿಡ್-19 ಆಹಾರ ಕಿಟ್‌ಗಾಗಿ ಬಿಡುಗಡೆಗೊಳಿಸಿದ ಅನುದಾನದಲ್ಲಿ ಬಾಕಿ ಉಳಿದ ಅನುದಾನ ಹೊರತುಪಡಿಸಿ) ಬಾಕಿಯಿದ್ದು, 2022-23ನೇ ಸಾಲಿಗೆ ಹಂಚಿಕೆಯಾದ ರೂ.1.00 ಲಕ್ಷಗಳು

ಸೇರಿದಂತೆ ಲಭ್ಯವಿರುವ ಅನುದಾನದ ಒಟ್ಟು ಮೊತ್ತವು **ರೂ.458.46** ಲಕ್ಷಗಳಾಗುತ್ತದೆ. ಸದರಿ ಲಭ್ಯವಿರುವ ಮೊತ್ತದಲ್ಲಿ ಬಹುಪಾಲು ಆಡಳಿತಾತ್ಮಕ ವೆಚ್ಚ ಭರಿಸಲು ಬಳಸಿಕೊಳ್ಳಬೇಕಾಗಿದೆ. ಯೋಜನೆಯ ಸಮಗ್ರ ಜಾರಿಗೆ ಅನುದಾನದ ಕೊರತೆಯಾಗಲಿದ್ದು, ಹೆಚ್ಚಿನ ಅನುದಾನ ಅವಶ್ಯಕತೆಯಿರುತ್ತದೆ. ಆದಾಗ್ಯೂ ಲೆಕ್ಕ ಶೀರ್ಷಿಕೆ 2230-01-111-0-05ಯಡಿ ಲಭ್ಯವಿರುವ ಒಟ್ಟು ಅನುದಾನ ರೂ. 458.46 ಲಕ್ಷಗಳನ್ನು ಮೇಲಿನ ಉದ್ದೇಶಗಳಿಗಾಗಿ ಬಳಸಿಕೊಳ್ಳಲು ಈ ಕೆಳಕಂಡಂತೆ ಕ್ರಿಯಾ ಯೋಜನೆಯನ್ನು ರೂಪಿಸಲಾಗಿದೆ.

| ಕ್ರ.ಸಂ. | ಸೌಲಭ್ಯಗಳ ವಿವರ | ಫಲಾನುಭವಿಗಳ ಸಂಖ್ಯೆ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|
| 01 | ಅಧಿಕಾರಿಗಳ ಮತ್ತು ಸಿಬ್ಬಂದಿಗಳ ವೇತನ/ಮಂಡಳಿಯ ಆಡಳಿತಾತ್ಮಕ ವೆಚ್ಚ | 81 | 350 |
| 02 | ಅಸಂಘಟಿತ ಕಾರ್ಮಿಕರ ನೋಂದಣಿ ಹಾಗೂ ಸ್ಮಾರ್ಟ್ ಕಾರ್ಡ್ ವಿತರಣೆ | 15,000 | 15 |
| 03 | ಶ್ರಮ ಸಮ್ಮಾನ ಪುರಸ್ಕಾರ | – | – |
| 04 | ಕಾರ್ಮಿಕ ಸೇವಾ ಕೇಂದ್ರಗಳ ನಿರ್ವಹಣೆ (169 ಕೇಂದ್ರಗಳು) | – | 25 |
| 05 | ಅಂತರಾಷ್ಟ್ರೀಯ ವಿದೇಶಿ ಉದ್ಯೋಗ ಕೋಶ | 150 | 20 |
| 06 | ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳು | – | 48.46 |
| | | ಒಟ್ಟು | 458.46 |

******

S.K.

**ಜಂಟಿ ಕಾರ್ಯದರ್ಶಿ**
**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಬೆಂಗಳೂರು**

com